ಹಸಿರ್ ಕೇಂದ್ರಿತ

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2325 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ |
| ಉತ್ತರಿಸಬೇಕಾದ ದಿನಾಂಕ | : | 29.03.2021 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರು. |

| ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಮೆ. ಭಾಗ್ಯಶ್ರೀ ಲಗಮುವ್ವ ಶುಗರ್ಸ್ ಲಿ. ಬೆಕ್ಕೇರಿ ಗ್ರಾಮ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ, ಇವರು ಮಾಲಿನ್ಯ ನಿಯಂತ್ರಣ ಮಂಡಳಿಯವರ ನಿಯಮಗಳನ್ನು ಉಲ್ಲಂಘಿಸಿ ಕಾರ್ಖಾನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಬಂದಿದ್ದಲ್ಲಿ, ಈ ಹಿಂದೆ ಕಾನೂನು ಬಾಹಿರವಾಗಿ ನಡೆಯುತ್ತಿದ್ದ ಈ ಕಾರ್ಖಾನೆಯನ್ನು ಮಾಲಿನ್ಯ ನಿಯಂತ್ರಣ ಮಂಡಳಿಯವರು ಸೀಜ್ ಮಾಡಿದ್ದರೂ ಸಹ ಅಕ್ರಮವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕಾರ್ಖಾನೆಯು ನಿಯಮಗಳನ್ನು ಉಲ್ಲಂಘಿಸಿ ನಡೆಯುತ್ತಿರುವುದು ಪರಿವೀಕ್ಷಣಾ ವರದಿಯಿಂದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರ ಗಮನಕ್ಕೆ ಬಂದಿದ್ದು, ಈ ಉದ್ದಿಮೆಗೆ ಮುಚ್ಚುವ ಮತ್ತು ಸೀಜ್ ಮಾಡುವ ಆದೇಶವನ್ನು ದಿನಾಂಕ: 02.04.2019 ರಂದು ಜಲ (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ, 1974 ಮತ್ತು ವಾಯು (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ, 1981 ರ ಅಡಿಯಲ್ಲಿ ನೀಡಲಾಗಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿ, ಚಿಕ್ಕೋಡಿಯವರು ಕಾರ್ಖಾನೆಯು ಅಕ್ರಮವಾಗಿ ನಡೆಸುತ್ತಿರುವುದಾಗಿ ದಿನಾಂಕ: 20.06.2019 ರಂದು ವರದಿ ನೀಡಿರುತ್ತಾರೆ. |
| ಇ) | ಸೀಜ್ ಮಾಡಿದ ಕಾರ್ಖಾನೆಯನ್ನು ಕಾನೂನುಬಾಹಿರವಾಗಿ ತೆರೆದು ನಡೆಸುತ್ತಿರುವ ಬಗ್ಗೆ ಮಾಲಿನ್ಯ ನಿಯಂತ್ರಣ ಮಂಡಳಿ, ಚಿಕ್ಕೋಡಿ, ಇವರು ಬೆಂಗಳೂರಿನ ಕೇಂದ್ರ ಕಛೇರಿಗೆ ವರದಿ ನೀಡಿದ್ದರೂ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಪ್ರಾದೇಶಿಕ ಕಛೇರಿ, ಚಿಕ್ಕೋಡಿ ರವರ ದಿನಾಂಕ: 20.06.2019 ರ ವರದಿಯ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ದಿನಾಂಕ: 16.07.2019 ರಂದು ಪ್ರಾದೇಶಿಕ ಕಛೇರಿ, ಚಿಕ್ಕೋಡಿ ರವರಿಗೆ ಕಾರ್ಖಾನೆಯ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲು ನಿರ್ದೇಶನ ನೀಡಿರುತ್ತದೆ. |

| | | |
|---|---|---|
| ಈ) | ಬಂದಿದ್ದಲ್ಲಿ, ಈ ಕಾರ್ಖಾನೆಯ ವಿರುದ್ಧ ಇದುವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ; ಇಲ್ಲದಿದ್ದಲ್ಲಿ, ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣಗಳೇನು? (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನದ ಹಿನ್ನೆಲೆಯಲ್ಲಿ ಪ್ರಾದೇಶಿಕ ಕಛೇರಿ ಚಿಕ್ಕೋಡಿಯವರು ದಿನಾಂಕ: 24.11.2020 ರಂದು ಪರಿವೀಕ್ಷಣೆ ನಡೆಸಿ ಕಾರ್ಖಾನೆಯು 90 ದಿನಗಳಿಂದ ಸ್ಥಗಿತವಾಗಿದೆ ಎಂದು ತಿಳಿಸಿರುತ್ತಾರೆ ಹಾಗೂ ದಿನಾಂಕ: 23.03.2021 ರಂದು ಪರಿವೀಕ್ಷಣೆ ನಡೆಸಿ ಉದ್ದಿಮೆ ಸ್ಥಗಿತವಾಗಿದೆ ಎಂದು ವರದಿ ಮಾಡಿರುತ್ತಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಕಾರ್ಖಾನೆಯ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಅಪಜೀ 61 ಇಪಿಸಿ 2021**

(ಸಿ.ಪಿ. ಯೋಗೇಶ್ವರ)
ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ
ಪ್ರವಾಸೋದ್ಯಮ ಸಚಿವರು.